# ಕರ್ನಾಟಕ ವಿಧಾನ ಪರಿಷತ್ತು

1. ಸದಸ್ಯರ ಹೆಸರು : ಶ್ರೀ ಅ. ದೇವೇಗೌಡ
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1108
3. ಉತ್ತರಿಸಬೇಕಾದ ದಿನಾಂಕ : 25-09-2020

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನರೇಗಾ ಯೋಜನೆಯ ಕಾಮಗಾರಿಗಳನ್ನು ಕೆಲವು ಮಾಜಿ ಸದಸ್ಯರು ಹಾಗೂ ಅಧ್ಯಕ್ಷರು ಮಾನವ ಶ್ರಮಕ್ಕೆ ಬದಲಾಗಿ ತಾವೇ ಯಂತ್ರಗಳ ಹಾಗೂ ಗುತ್ತಿಗೆ ಮೇಲೆ ನಿರ್ವಹಿಸಿ ರೈತರ ಬ್ಯಾಂಕ್ ಖಾತೆಗಳಿಗೆ ಹಣ ಹಾಕಿಸಿ ನಂತರ ಅದನ್ನು ಅವರ ಮೂಲಕ ತಾವೇ ಪಡೆದುಕೊಂಡು ಕೋಟ್ಯಾಂತರ ರೂಪಾಯಿ ವಂಚಿಸಿದ್ದು, ಈ ಬಗ್ಗೆ ಇಲಾಖೆ ಉನ್ನತಾಧಿಕಾರಿಗಳಿಂದ ತನಿಖೆ ಮಾಡಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ; | ಹೌದು. ಉನ್ನತಾಧಿಕಾರಿಗಳ ತನಿಖಾ ವರದಿಯಲ್ಲಿ ಆರೋಪ ಸಾಬೀತಾದರೆ ಸೂಕ್ತ ಕ್ರಮ ಜರುಗಿಸಲಾಗುವುದು. |
| ಆ) | ಇನ್ನು ಮುಂದೆ ಈ ರೀತಿ ಯೋಜನೆ ಮೂಲ ಉದ್ದೇಶವನ್ನು ಬುಡಮೇಲು ಮಾಡಿ ಯಂತ್ರಗಳಿಂದ ಮಾಜಿ ಸದಸ್ಯರೇ ಕೆಲಸ ಮಾಡಿಸಿ ಸರ್ಕಾರದ ನೀತಿ ನಿಯಮಗಳನ್ನೇ ಬುಡಮೇಲು ಮಾಡಿ ವಂಚಿಸಿ, ಕೋಟ್ಯಾಂತರ ರೂ.ಗಳು ಹಾಳು ನಷ್ಟ ಮಾಡುತ್ತಿರುವುದನ್ನು ತಡೆಯಲು ಸರ್ಕಾರ ಕೂಡಲೇ ಕೈಗೊಳ್ಳುವ ಕ್ರಮಗಳೇನು? | ಯಾವುದೇ ವ್ಯಕ್ತಿಗಳು ಯೋಜನೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಕೆಲಸ ನಿರ್ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಾಗ ತನಿಖೆ ಮಾಡಿಸಲಾಗುವುದು. ಆಪಾದನೆ ಸಾಬೀತಾದಲ್ಲಿ ಸಂಬಂಧಪಟ್ಟವರಿಂದ ವಸೂಲಾತಿಗೆ ಕ್ರಮ ಕೈಗೊಳ್ಳಲಾಗುವುದು ಮತ್ತು ಕ್ರಿಮಿನಲ್ ಮೊಕದ್ದಮೆ ಸಹ ದಾಖಲಿಸಲಾಗುವುದು. ಅಲ್ಲದೇ ಸಂಬಂಧಿಸಿದ ಅಧಿಕಾರಿಗಳ ಮೇಲೂ ಶಿಸ್ತು ಕ್ರಮ ಜರುಗಿಸಲಾಗುವುದು. |

ಸಂಖ್ಯೆ: ಗ್ರಾಅಪ 38(206) ಉಖಾಯೋ 2019

**(ಕೆ.ಎಸ್.ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

**ಕೆ.ಎಸ್. ಈಶ್ವರಪ್ಪ**
**ಗ್ರಾಮೀಣಾಭಿವೃದ್ಧಿ ಮತ್ತು**
**ಪಂಚಾಯತ್ ರಾಜ್ ಸಚಿವರು**